All India Radio: Bangalore
Regional Bulletin In Kannada
02.03.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯ ವಿಧಾನಮಂಡಲ ಅಧಿವೇಶನ; ಜಂಟಿ ಸದನ ಉದ್ದೇಶಿಸಿ ನಾಳೆ ರಾಜ್ಯಪಾಲರಿಂದ ಭಾಷಣ
- ಮೂರು ದಿನಗಳ ಹಂಪಿ ಉತ್ಸವ ಇಂದು ಸಂಪನ್ನ
- ಮೂರು ಎಕರೆಗಿಂತ ಹೆಚ್ಚಿನ ಅರಣ್ಯ ಭೂಮಿ ಒತ್ತುವರಿ ವಿರುದ್ಧ ಕ್ರಮ - ಅರಣ್ಯ ಸಚಿವ ಈಶ್ವರ್ ಖಂಡ್ರೆ
- ವಿಧಾನಸೌಧ ಆವರಣದಲ್ಲಿ ಇದೇ ಮೊದಲ ಬಾರಿಗೆ ಆಯೋಜಿಸಿದ್ದ ಪುಸ್ತಕ ಮೇಳಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ

<><><><>

ನಾಳೆಯಿಂದ ಇದೇ ೨೧ ರವರೆಗೆ ರಾಜ್ಯ ವಿಧಾನ ಮಂಡಲದ ಬಜೆಟ್ ಅಧಿವೇಶನ ನಡೆಯಲಿದೆ. ನಾಳೆ ಬೆಳಗ್ಗೆ ೧೧ ಗಂಟೆಗೆ ರಾಜ್ಯಪಾಲರು ಜಂಟಿ ಸದನ ಉದ್ದೇಶಿಸಿ ಮಾತನಾಡಲಿದ್ದು, ನಂತರ ಮೂರು ದಿನ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ನಡೆಯಲಿದೆ. ಮಾರ್ಚ್ ೭ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯ ಬಜೆಟ್ ಮಂಡನೆ ಮಾಡಲಿದ್ದಾರೆ.

<><><><>

ರಾಜ್ಯ ವಿಧಾನ ಪರಿ?ತ್ತಿನ, ೧೫೫ನೇ ಅಧಿವೇಶನದ ನಾಳೆಯಿಂದ ಈ ತಿಂಗಳ ೨೧ರ ವರೆಗೆ, ಒಟ್ಟು ೧೫ ದಿನಗಳ ಕಾಲ ನಡೆಯಲಿದೆ ಎಂದು ವಿಧಾನಪರಿ?ತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ಉಭಯ ಸದನಗಳನ್ನು ಉದ್ದೇಶಿಸಿ, ನಾಳೆ ಭಾಷಣ ಮಾಡಲಿದ್ದಾರೆ. ಪ್ರಸಕ್ತ ಅಧಿವೇಶನಕ್ಕೆ ಈವರೆಗೆ ಒಟ್ಟು ೬೯೩ ಪ್ರಶ್ನೆಗಳನ್ನು ಸ್ವೀಕರಿಸಲಾಗಿದೆ. ಆ ಪೈಕಿ, ೪೩೧ ಚುಕ್ಕೆ ಗುರುತಿನ ಹಾಗೂ ೨೬೨ ಚುಕ್ಕೆ ರಹಿತ ಪ್ರಶ್ನೆಗಳಾಗಿವೆ. ನಿಯಮ ೭೨ರ ಅಡಿಯಲ್ಲಿ ೫೭ ಸೂಚನೆಗಳು ಹಾಗೂ ನಿಯಮ ೩೩೦ರ ಅಡಿ, ೨೪ ಸೂಚನೆಗಳನ್ನು ಸ್ವೀಕರಿಸಲಾಗಿದೆ ಎಂದು ಮಾಹಿತಿ ನೀಡಿದರು. ಈ ಬಾರಿ ಅಧಿವೇಶನದಲ್ಲಿ, ಹೊಸ ವಿ?ಯಗಳ ಚರ್ಚೆಗೆ ಅವಕಾಶ ನೀಡಲಾಗಿದೆ. ಹದಿಹರೆಯದ ಮಕ್ಕಳು ಅನುಭವಿಸುತ್ತಿರುವ ಸವಾಲುಗಳು, ಪ್ರತಿಸ್ಪಂದನೆಗಳು ಮತ್ತು ಪರಿಹಾರೋಪಾಯಗಳ’

ಕುರಿತು ಚರ್ಚಿಸಲು ಹಾಗೂ ಮಕ್ಕಳು ಮತ್ತು ಯುವ ಪೀಳಿಗೆ, ಮಾದಕ ದ್ರವ್ಯಗಳ ವ್ಯಸನಿಗಳಾಗುತ್ತಿರುವುದನ್ನು ತಡೆಗಟ್ಟುವ ಕುರಿತು ಚರ್ಚಿಸಲು, ವಿಷಯವನ್ನು ಕಲಾಪ ಸಮಿತಿಗೆ ಮಂಡಿಸಲಾಗಿದೆ ಎಂದು ವಿಧಾನಪರಿ?ತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

<><><>

ಶೋಷಿತರ ನೋವು, ನಲಿವುಗಳ ಪರ ಕವಿತೆ ನಿಲ್ಲಬೇಕು. ಕವಿ ಅವರ ಧ್ವನಿಯಾಗಬೇಕು. ಕವಿಗಳು ಶೋಷಿತರಿಗೆ ಆದ ಅನ್ಯಾಯ ಪ್ರಶ್ನಿಸಿ, ಕವಿತೆಗಳ ಮೂಲಕ ಈ ಅನ್ಯಾಯವನ್ನು ಸರಿ ಮಾಡುವ ಮಾರ್ಗಗಳನ್ನು ಹುಡುಕುವ ಕೆಲಸ ಮಾಡಬೇಕು ಎಂದು ಕವಿ, ವಿಮರ್ಶಕ ಡಾ. ವೆಂಕಟಗಿರಿ ದಳವಾಯಿ ಅಭಿಪ್ರಾಯಪಟ್ಟಿದ್ದಾರೆ. ಹಂಪಿ ಉತ್ಸವ-೨೦೨೪ರ ಅಂಗವಾಗಿ ಶ್ರೀ ವಿರೂಪಾಕ್ಷೇಶ್ವರ ದೇವಾಲಯ ವೇದಿಕೆಯಲ್ಲಿಂದು ಹಮ್ಮಿಕೊಂಡಿದ್ದ ೩ನೇ ದಿನದ ಯುವ ಕವಿಗೋಷ್ಠಿ ಕಾರ್ಯಕ್ರಮವನ್ನು ಸ್ವರಚಿತ ಕವನ ಓದುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಮಾತನಾಡಿ, ಯುವ ಕವಿಗಳಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಹಂಪಿ ಉತ್ಸವದಲ್ಲಿ ಯುವ ಕವಿಗೋಷ್ಠಿಯನ್ನು ಆಯೋಜನೆ ಮಾಡಲಾಗಿದೆ. ಉತ್ಸವಕ್ಕೆ ಆಗಮಿಸಿದ ಲಕ್ಷಾಂತರ ಜನರನ್ನು ಚಿಂತನೆಗೆ ಹಚ್ಚುವ, ಅವರಲ್ಲಿ ಬದಲಾವಣೆ ತರುವ ಶಕ್ತಿ ಕವಿತೆಗಿದೆ. ಯುವ ಕವಿಗಳು ಈ ನಿಟ್ಟಿನಲ್ಲಿ ಕವಿತೆಗಳನ್ನು ರಚಿಸಬೇಕು ಎಂದು ಹೇಳಿದರು. ಮೂರು ದಿನಗಳ ಹಂಪಿ ಉತ್ಸವ ಇಂದು ಸಂಪನ್ನಗೊಂಡಿತು.

<><><>

ಪರಿಶಿಷ್ಟ ಸಮುದಾಯದ ವಿವಿಧ ಸಂಘಟನೆಗಳೊಂದಿಗೆ ವಿಧಾನ ಪರಿಷತ್‌ನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಬೆಂಗಳೂರಿನಲ್ಲಿಂದು ದುಂಡು ಮೇಜಿನ ಸಭೆ ನಡೆಯಿತು.  ಬಳಿಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಪರಿಶಿಷ್ಟ ಸಮುದಾಯಕ್ಕೆ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರ ಅನ್ಯ ಉದ್ದೇಶಗಳಿಗೆ ಬಳಸುವುದು ಅತ್ಯಂತ ಖಂಡನಾರ್ಹ ಎಂದು ಹೇಳಿದರು. ರಾಜ್ಯ ಸರ್ಕಾರಕ್ಕೆ ಸಂಬಂಧಿಸಿದ ಹಲವು ವಿಷಯಗಳ ಕಡತಗಳನ್ನು ರಾಜ್ಯಪಾಲರು ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದಾರೆ. ಇದನ್ನೇ ನೆಪವಾಗಿಟ್ಟುಕೊಂಡು, ರಾಜ್ಯಪಾಲರ ಅಧಿಕಾರ ಮೊಟಕುಗೊಳಿಸುವ ಪ್ರಯತ್ನಕ್ಕೆ ಕೈಹಾಕಿರುವುದು ಒಳ್ಳೆಯ ಬೆಳವಣಿಗೆಯಲ್ಲ. ರಾಜ್ಯಪಾಲರ ಹುದ್ದೆ ಸಾಂವಿಧಾನಿಕ ಹುದ್ದೆಯಾಗಿದ್ದು, ಅವರ ಅಧಿಕಾರವನ್ನು ಕಸಿಯುವ ಪ್ರಯತ್ನ ಸಲ್ಲದು ಎಂದರು. ರಾಜ್ಯಪಾಲರು ವಿವಿಧ ವಿಧೇಯಕಗಳನ್ನು ಕಾರಣ ಕೇಳಿ ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದಾರೆ. ಅದಕ್ಕೆ ಸೂಕ್ತ ಉತ್ತರ ನೀಡುವುದನ್ನು ಬಿಟ್ಟು,

ಅಧಿಕಾರ ಮೊಟಕುಗೊಳಿಸುವ ಹುನ್ನಾರ ಸಾಂವಿಧಾನಿಕ ಹುದ್ದೆ ಮತ್ತು ಸಂವಿಧಾನಕ್ಕೆ ಮಾಡುತ್ತಿರುವ ಅಪಚಾರ ಎಂದು ಆರೋಪಿಸಿದರು. ಕನ್ನಡ ಚಿತ್ರರಂಗದ ನಟ, ನಟಿಯರ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆ ಅತ್ಯಂತ ಖಂಡನಾರ್ಹ. ಕನ್ನಡದ ಕಲಾವಿದರು ಸಂಕಷ್ಟದಲ್ಲಿದ್ದಾರೆ. ಅವರ ನೆರವಿಗೆ ಸರ್ಕಾರ ಧಾವಿಸಬೇಕು. ಅದನ್ನು ಬಿಟ್ಟು ಅವರ ಬಗ್ಗೆ ಲಘುವಾಗಿ ಮಾತನಾಡುವುದು ಒಳ್ಳೆಯ ನಡೆಯಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ಹೇಳಿದರು. ಸಭೆಯಲ್ಲಿ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್, ಮಾಜಿ ಸಚಿವ ಎನ್.ಮಹೇಶ್, ಮಾಜಿ ಸಂಸದ ಮುನಿಸ್ವಾಮಿ ಸೇರಿದಂತೆ ಸಂಘಟನೆಗಳ ಪ್ರಮುಖರು ಪಾಲ್ಗೊಂಡಿದ್ದರು.

<><><>

ಮೂರು ಎಕರೆಗಿಂತ ಹೆಚ್ಚಿನ ಅರಣ್ಯ ಭೂಮಿ ಒತ್ತುವರಿ ಮಾಡಿರುವವರ ವಿರುದ್ಧ ಕ್ರಮ ಕೈಗೊಂಡು, ಒತ್ತುವರಿ ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ. ತುಮಕೂರಿನಲ್ಲಿ ಹಾಸನ ವೃತ್ತದ ಅರಣ್ಯ ಮತ್ತು ಪರಿಸರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಪಟ್ಟಾ ಜಮೀನು ಮತ್ತು ಜೀವನೋಪಾಯಕ್ಕಾಗಿ ಮಾಡಿಕೊಂಡಿರುವ ಅರಣ್ಯ ಒತ್ತುವರಿ ಎರಡೂ ಸೇರಿ ೩ ಎಕರೆಗಿಂತ ಕಡಿಮೆ ಇರುವ ಸಣ್ಣ ಒತ್ತುವರಿದಾರರಿಗೆ ತೊಂದರೆ ನೀಡದಂತೆ ನಿರ್ದೇಶಿಸಿದರು. ಡೀಮ್ಡ್ ಅರಣ್ಯ ಕುರಿತಂತೆ ನ್ಯಾಯಾಲಯಕ್ಕೆ ೨೦೨೨ರಲ್ಲಿ ಸಲ್ಲಿಸಲಾಗಿರುವ ಪ್ರಮಾಣ ಪತ್ರದಲ್ಲಿರುವ ಎಲ್ಲ ಪರಿಭಾವಿತ ಅರಣ್ಯದ ಜಂಟಿ ಸರ್ವೆ ಕಾರ್ಯವನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಅರಣ್ಯ ಅಧಿಕಾರಿಗಳಿಗೆ ಸೂಚಿಸಿದ ಸಚಿವ ಈಶ್ವರ್ ಖಂಡ್ರೆ, ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ದೀರ್ಘ ಕಾಲದಿಂದ ಬಾಕಿ ಇರುವ ಅರಣ್ಯ ಅಪರಾಧ, ಒತ್ತುವರಿ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಕ್ರಮ ವಹಿಸುವಂತೆ ನಿರ್ದೇಶನ ನೀಡಿದರು.

<><><>

ವಿಧಾನಸೌಧ ಆವರಣದಲ್ಲಿ ಇದೇ ಮೊದಲ ಬಾರಿಗೆ ಆಯೋಜಿಸಿದ್ದ ಪುಸ್ತಕ ಮೇಳಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದೆ. ಫೆಬ್ರವರಿ ೨೭ ರಿಂದ ಪುಸ್ತಕ ಮೇಳ ನಡೆಯುತ್ತಿದೆ. ಮಕ್ಕಳ ಸಾಹಿತ್ಯ, ಸಿನಿಮಾ, ಸಂವಿಧಾನ ಸೇರಿದಂತೆ ಕನ್ನಡ ಸಾಹಿತ್ಯಕ್ಕೆ ಸಂಬಂಧಿಸಿದ ಅನೇಕ ವಿಷಯಗಳ ಕುರಿತು ಬರಹಗಾರರು ಮತ್ತು ತಜ್ಞರು ಸಂವಾದ ನಡೆಸಿದರು. ನಾಲ್ಕು ದಿನಗಳ ಪುಸ್ತಕ ಮೇಳಕ್ಕೆ ಸಾವಿರಾರು ನಾಗರಿಕರು ಆಗಮಿಸಿ, ತಮ್ಮ ನೆಚ್ಚಿನ

ಪುಸ್ತಕಗಳನ್ನು ಖರೀದಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಇಂದು ಪುಸ್ತಕ ಮೇಳ ವೀಕ್ಷಿಸಿದರು. ವಿಧಾನಸೌಧಗೆ ಆಗಮಿಸಿದ ರಾಜ್ಯಪಾಲರನ್ನು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಬರಮಾಡಿಕೊಂಡರು. ಇದೇ ವೇಳೆ, ನಾಳೆಯೂ ಕೂಡ ಪುಸ್ತಕ ಮೇಳ ಇರಲಿದೆ ಎಂದು ಯು.ಟಿ. ಖಾದರ್ ತಿಳಿಸಿದ್ದಾರೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ದರ್ಜಿಪೇಟೆಯಲ್ಲಿರುವ ಪಾಂಡುರಂಗ ಸ್ವಾಮಿ ದೇವಾಲಯದಲ್ಲಿ ಸಂತ ನಿಳೋಬ ಮಹಾರಾಜರ ೯೧ನೇ ದಿಂಡಿ ಸಪ್ತಾಹ ಕಾರ್ಯಕ್ರಮ ಇಂದು ನಡೆಯಿತು.  ಇದರ ಅಂಗವಾಗಿ ಭಾನುದಾಸ ಸರ್ವದೆ ಬಂಕಾಪುರ ಅವರ ನೇತೃತ್ವದಲ್ಲಿ ಕೀರ್ತನೆ ಮತ್ತು ಪಂಡರಿ ಭಜನೆ ನಡೆಯಿತು. ಆಗಮಿಸಿದ ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು. ನಂತರ ಸಂಜೆ ಪಾಡುರಂಗ ಸ್ವಾಮಿ ದಿಂಡಿ ಪಲ್ಲಕ್ಕಿ ಉತ್ಸವ ನೆರವೇರಿತು.

<><><>

ಚಿಕ್ಕಬಳ್ಳಾಪುರ ತಾಲೂಕಿನ ವರದಹಳ್ಳಿಯಲ್ಲಿ ಹಕ್ಕಿ ಜ್ವರ ಹತೋಟಿಯಲ್ಲಿದೆ. ವರದಹಳ್ಳಿ ಗ್ರಾಮಸ್ಥರೂ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಗ್ರಾಮಸ್ಥರು ಆತಂಕ ಪಡುವ ಅಗತ್ಯವಿಲ್ಲ ಎಂದು ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆಯ ಅಪರ ನಿರ್ದೇಶಕ ಡಾ. ಹೆಚ್.ಎಸ್.ಶಿವರುದ್ರಪ್ಪ ಹೇಳಿದ್ದಾರೆ. ಹಕ್ಕಿ ಜ್ವರ ಕಾಣಿಸಿಕೊಂಡ ವರದಹಳ್ಳಿ ಗ್ರಾಮಕ್ಕೆ ಇಂದು ಭೇಟಿ ನೀಡಿ, ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಕ್ಕಿ ಜ್ವರ ಸೋಂಕು ನಿಯಂತ್ರಣಕ್ಕೆ ಕೈಗೊಂಡ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿ, ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಮುಂದಿನ ಮೂರ್ನಾಲ್ಕು ದಿನಗಳಲ್ಲಿ ವರದಹಳ್ಳಿ ಗ್ರಾಮದಲ್ಲಿ ಕೋಳಿ ಕಳೆದುಕೊಂಡವರಿಗೆ ಸರ್ಕಾರದ ನಿಯಮಾನುಸಾರ ಪರಿಹಾರ ದೊರೆಯಲಿದೆ ಎಂದರು.  ಕಳೆದ ಒಂದು ವಾರದ ಹಿಂದೆ ಗ್ರಾಮದಲ್ಲಿ ಹಕ್ಕಿ ಜ್ವರ ಪತ್ತೆಯಾಗಿ ೩೦ ರಿಂದ ೪೦ ಕೋಳಿಗಳು ಸಾವನ್ನಪ್ಪಿದ್ದವು. ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ ಕೂಡಲೇ ಎಚ್ಚೆತ್ತಕೊಂಡು, ಗ್ರಾಮದಲ್ಲಿನ ಕೋಳಿಗಳ ಸಮೀಕ್ಷೆ ನಡೆಸಿ, ಗ್ರಾಮಸ್ಥರ ಮನವೊಲಿಸಿ, ಅವರ ಸಹಕಾರದೊಂದಿಗೆ ೪೪೭ ಕೋಳಿಗಳನ್ನು ಇಲಾಖೆಯ ಸುಪರ್ದಿಗೆ ಪಡೆದು, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಯಿತು ಎಂದು ತಿಳಿಸಿದರು.

<><><>

ಮಠಗಳು ಹೆಚ್ಚು ಧಾರ್ಮಿಕ, ಆಧ್ಯಾತ್ಮಿಕ ಕಾರ್ಯಕ್ರಮಗಳನ್ನು ಮಾಡಿದಾಗ ಜನರಲ್ಲಿ ಒಗ್ಗಟ್ಟು, ಸದ್ಭಾವನೆ ಮೂಡುವ ಜೊತೆಗೆ ಜನರ ಏಳಿಗೆ ಕೂಡ ಸಾಧ್ಯವಾಗುತ್ತದೆ ಎಂದು ಆಹಾರ ಮತ್ತು

ನಾಗರೀಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಹರಿಹರಪುರ ಮಠದ ಗುರುದೀಕ್ಷಾ ಪಟ್ಟಾಭಿಷೇಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹರಿಹರಪುರ ಮಠ, ಶೃಂಗೇರಿ ಶಾರದಾ ಮಠ, ಇವೆಲ್ಲವು ಶಕ್ತಿ ಪೀಠಗಳಾಗಿದ್ದು, ಭಕ್ತರಿಗೆ ಉತ್ತಮ ಮಾರ್ಗದರ್ಶನ ನೀಡುವ ತಾಣಗಳಾಗಿವೆ ಎಂದರು. ಕಾರ್ಯಕ್ರಮದಲ್ಲಿ ಹರಿಹರಪುರ ಮಠದ ಶ್ರೀ ಸ್ವಯಂ ಪ್ರಕಾಶ ಸಚ್ಚಿದಾನಂದ ಸರಸ್ವತಿ ಮಹಾಸ್ವಾಮೀಜಿ, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಶಾಸಕ ಟಿ.ಡಿ ರಾಜೇಗೌಡ ಉಪಸ್ಥಿತರಿದ್ದರು.

<><><><>

ಇನ್ನು ಹವಾವರ್ತಮಾನ

ರಾಜ್ಯಾದ್ಯಂತ ಒಣ ಹವೆ ಮುಂದುವರಿದೆ. ರಾಜ್ಯದ ಅತಿ ಹೆಚ್ಚು ಉಷ್ಣಾಂಶ ಕಾರವಾರದಲ್ಲಿ ೩೮.೨ ಡಿಗ್ರಿ ಸೆಲ್ಸಿಯಸ್ ತಾಪಮಾನ ಹಾಗೂ ಅತಿ ಕಡಿಮೆ ಉಷ್ಣಾಂಶ ಬೆಳಗಾವಿ ೧೫.೨ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಬೆಂಗಳೂರು ಹಾಗೂ ಸುತ್ತಮುತ್ತು ಭಾಗಶಃ ಮೋಡಕವಿದ ವಾತಾವರಣ; ಬೆಳಗಿನ ವೇಳೆ ಮಂಜು ಬೀಳುವ ಸಾಧ್ಯತೆ; ಗರಿಷ್ಠ ೩೨ ಮತ್ತು ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

<><><><>

ಸಂಕ್ಷಿಪ್ತ ಸುದ್ದಿಗಳು

1. ಹೊಸಕೋಟೆಯ ಮಾಲೂರಿನಲ್ಲಿ ನಿರ್ಮಾಣಗೊಂಡಿರುವ ನೂತನ ಆಹಾರ ಪದಾರ್ಥಗಳ ದಾಸ್ತಾನು ಘಟಕಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತ ಅಕ್ರಮ್ ಪಾಷಾ ಚಾಲನೆ ನೀಡಿ, ಆಹಾರದ ಗುಣಮಟ್ಟವನ್ನು ಪರಿಶೀಲಿಸಿ, ಗುಣಮಟ್ಟ ಕಾಪಾಡಿಕೊಳ್ಳುವುದರೊಂದಿಗೆ ವಿತರಣೆಯಲ್ಲಿ ಯಾವುದೇ ಲೋಪವಾಗದಂತೆ ಕ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

<><><><>

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ತನ್ನ ಕೊನೆಯ ಗುಂಪು ಹಂತದ ಪಂದ್ಯದಲ್ಲಿ ಭಾರತ ತಂಡ, ನ್ಯೂಜಿಲೆಂಡ್ ತಂಡದೊಂದಿಗೆ ಮುಖಾಮುಖಿಯಾಗಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೪೯ ರನ್ ಮಾಡಿದೆ. ೨೫೦ ರನ್‌ಗಳ ಗುರಿ ಬೆನ್ನತ್ತಿರುವ ನ್ಯೂಜಿಲೆಂಡ್, ಇತ್ತೀಚಿನ ವರದಿ ಬಂದಾಗ, ೧.೪ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟಕ್ಕೆ ೯ ರನ್ ಮಾಡಿ ಆಡುತ್ತಿದೆ. ಉಭಯ ತಂಡಗಳು ಈಗಾಗಲೇ ಸೆಮಿಫೈನಲ್

ಹಂತಕ್ಕೆ ಅರ್ಹತೆ ಪಡೆದಿದ್ದು, ಸತತ ಐದು ಗೆಲುವಿನ ಭರವಸೆಯೊಂದಿಗೆ ಕಣಕ್ಕಿಳಿಯುತ್ತಿವೆ. ಈ ಪಂದ್ಯದಲ್ಲಿ ಗೆಲುವು ಸಾಧಿಸುವ ತಂಡ 'ಎ' ಗುಂಪಿನ ಅಂಕಪಟ್ಟಿಯಲ್ಲಿ ಅಗ್ರ ಸ್ಥಾನಕ್ಕೇರಲಿದೆ. ಭಾರತ, ಈ ಪಂದ್ಯ ಗೆದ್ದು, ಅಂಕಪಟ್ಟಿಯಲ್ಲಿ ಅಗ್ರ ಸ್ಥಾನಕ್ಕೇರಿದಲ್ಲಿ ಮಾರ್ಚ್ ೪ ರಂದು ನಡೆಯಲಿರುವ ಪಂದ್ಯದಲ್ಲಿ ಆಸ್ಟ್ರೇಲಿಯಾವನ್ನು ಎದುರಿಸಲಿದ್ದರೆ, ಮಾರ್ಚ್ ೫ ರಂದು ನಡೆಯಲಿರುವ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ, ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>